ದಿಃ 13.02.2026

**ಪ್ರಭಾರ ಅಪರ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ**

**ಹೊಳಲ್ಕೆರೆ.**

**ಸಿ.ಸಿ.1018/2020**

| | | | |
|---|---|---|---|
| ಸಾಕ್ಷಿಯ ಹೆಸರು | : | ಬಿ.ವಿ.ವಿಜಯ್ ಕುಮಾರ್ | ಪ್ರಾ.ಸಾಃ2 |
| ತಂದೆಯ ಹೆಸರು | : | ಬಸಪ್ಪ | ಚಾಸಾಃ3 |
| ವಯಸ್ಸು | : | 59 ವರ್ಷ | |
| ಕೆಲಸ | : | ವ್ಯವಸಾಯ | ಸಾ ಪ್ರ ಬೋ |
| ವಾಸ | : | ರಂಗಾಪುರ ಗ್ರಾಮ | ದಿಃ13.02.2026 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

1. 3 ನೇ ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ. ಚಾಸಾ-1 ರವರು ಗೊತ್ತು. ಚಾಸಾ-4 ಮತ್ತು 5 ರವರು ಗೊತ್ತಿಲ್ಲ. ಆರೋಪಿತರು ಮತ್ತು ಚಾಸಾ-1 ರವರ ನಡುವಿನ ಗಲಾಟೆಯ ಕುರಿತು ನನಗೆ ಗೊತ್ತಿಲ್ಲ. ನಾನು ಯಾವುದೇ ಗಲಾಟೆಯನ್ನು ನೋಡಿಲ್ಲ. ಈ ಕುರಿತು ನಾನು ತನಿಖಾಧಿಕಾರಿಗೆ ಯಾವುದೇ ಹೇಳಿಕೆಯನ್ನು ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲು ಎ.ಪಿ.ಪಿ.ಯವರಿಂದಃ**

2. 2005 ನೇ ಸಾಲಿನಲ್ಲಿ ಮೃತ 1 ನೇ ಆರೋಪಿತನೊಂದಿಗೆ ಮೃತ ಚಾಸಾ-1 ರವರ ವಿವಾಹ ಆಗಿದ್ದು, ಗಂಡ ಹೆಂಡತಿ ಮೂರು ವರ್ಷಗಳ ಕಾಲ ಅನ್ಯೂನ್ಯವಾಗಿ ಇದ್ದರು ಎಂದರೆ ಗೊತ್ತಿಲ್ಲ. ಮೃತ ಚಾಸಾ-1 ರವರಿಗೆ ಮಕ್ಕಳಾಗಲಿಲ್ಲ ಎಂಬ ಕಾರಣದಿಂದ ಮೃತ 1 ನೇ ಆರೋಪಿತ ಮನೆಯಿಂದ ಹೊಡೆದು ಕಳುಹಿಸಿದ್ದರು ಎಂದರೆ ಸರಿಯಲ್ಲ. ದಿನಾಂಕ 13.02.2012 ರಂದು ಬೆಳಿಗ್ಗೆ 11.00 ಗಂಟೆ ಸಮಯದಲ್ಲಿ ಚಾಸಾ-1 ಮತ್ತು 5 ರವರು ನಮ್ಮ ಮನೆಯ ಬಳಿ ಬಂದು ಇದ್ದರು ಎಂದರೆ ಸರಿಯಲ್ಲ. ಚಾಸಾ-1 ರವರು ಚಾಸಾ-5 ರವರಿಗೆ ಮನೆಯ ಒಳಗೆ ಬನ್ನಿ ಎಂದು ಕರೆದರು ಎಂದರೆ ಸರಿಯಲ್ಲ. ಆಗ ಮೃತ 1 ನೇ

ದಿ: 13.02.2026

ಆರೋಪಿ ಮೃತ ಚಾಸಾ-1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು, ಕೊಲೆ ಬೆದರಿಕೆ ಹಾಕಿರುತ್ತಾನೆ ಎಂದರೆ ಸರಿಯಲ್ಲ. ಆಗ ನಾನು, ಚಾಸಾ-4 ಮತ್ತು 5 ರವರು ಗಲಾಟೆ ಬಿಡಿಸಿದೆವು ಎಂದರೆ ಸರಿಯಲ್ಲ. ಈ ಕುರಿತು ನಾನು ದಿನಾಂಕ 15.02.2012 ರಂದು ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ನಾನು 3 ನೇ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಇರುವುದಿಲ್ಲ ಎಂದು ಹೇಳಿರುತ್ತಾರೆ.**

**ಮರು ವಿಚಾರಣೆ ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಪ್ರಭಾರ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ.